ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಶಾಲಾ ಮಕ್ಕಳ ರಕ್ಷಣಾ ನೀತಿಯ ಕುರಿತು

ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು):-

433(589) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಸರ್ಕಾರವು ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಮಕ್ಕಳ ರಕ್ಷಣೆಯನ್ನು ಮಾಡುವ ಉದ್ದೇಶದಿಂದ ಶಾಲಾ ಮಕ್ಕಳ ರಕ್ಷಣಾ ನೀತಿಯನ್ನು ಅಳವಡಿಸಿಕೊಂಡಿದೆಯೇ; ಈ ನೀತಿಯಿಂದ ಮಕ್ಕಳು ಸರಿಯಾಗಿ ಶಾಲೆಗೆ ಬಂದು ಧೈರ್ಯವಾಗಿ ತಮ್ಮ ಅನಿಸಿಕೆ ಮತ್ತು ಅಭಿಪ್ರಾಯವನ್ನು ತಿಳಿಸಲು ಪೂರಕವಾಗಿದೆಯೇ;

(ಆ) ರಾಜ್ಯ ಸರ್ಕಾರ ಮಕ್ಕಳ ರಕ್ಷಣಾ ನೀತಿಯನ್ನು ಸರ್ಕಾರದ ಗೆಜೆಟ್‌ನಲ್ಲಿ ಪ್ರಕಟಿಸಿದೆಯೇ;

(ಇ) ಈ ನೀತಿಯನ್ನು ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಶಾಲೆಗಳು ಒಪ್ಪಿಕೊಂಡು ಅನುಸರಿಸುತ್ತಿವೆಯೇ;

(ಈ) ಯಾವುದಾದರೂ ಶಾಲೆಗಳು ಈ ನೀತಿಯನ್ನು ಅಳವಡಿಸಿಕೊಳ್ಳದಿದ್ದಲ್ಲಿ ಅಥವಾ ಉಲ್ಲಂಘಿಸಿದ್ದಲ್ಲಿ ಅವುಗಳ ಮೇಲೆ ಜರುಗಿಸುವ ಕ್ರಮಗಳೇನು;

(ಉ) ಈ ರೀತಿಯ ಕ್ರಮಗಳನ್ನು ಜರುಗಿಸುವ ಹೊಣೆಯನ್ನು ಯಾರಿಗೆ ನೀಡಲಾಗಿದೆ ? (ವಿವರ ನೀಡುವುದು)